Akashvani : Bangalore

National Bulletin In Kannada

25.05.2024 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

25.05.2024 : 7.35AM

*******

**ಮುಖ್ಯಾಂಶಗಳು:**

1. ೬ನೇ ಹಂತದ ಲೋಕಸಭಾ ಚುನಾವಣೆಗೆ ಮತದಾನ ಪ್ರಗತಿಯಲ್ಲಿ
2. ೭ನೇ ಹಾಗೂ ಅಂತಿಮ ಹಂತದ ಸಾರ್ವತ್ರಿಕ ಚುನಾವಣೆಗೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರಿಂದ ಬಿರುಸಿನ ಪ್ರಚಾರ
3. ಬಂಗಾಳಕೊಲ್ಲಿಯಲ್ಲಿ ರೆಮಲ್ ಚಂಡಮಾರುತದ ತೀವ್ರತೆ ನಾಳೆ ಹೆಚ್ಚಾಗುವ ಸಂಭಾವ್ಯತೆ; ಕರಾವಳಿ ಕಾವಲು ಪಡೆಯಿಂದ ಮುನ್ನೆಚ್ಚರಿಕಾ ಕ್ರಮ
4. ಐಪಿಎಲ್ ಕ್ರಿಕೆಟ್; ಎರಡನೇ ಕ್ವಾಲಿಫೈಯರ್‌ನಲ್ಲಿ ರಾಜಸ್ತಾನ್ ರಾಯಲ್ಸ್ ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್‌ಗೆ ೩೬ ರನ್‌ಗಳ ಜಯ

*********

ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಲೋಕಸಭಾ ಚುನಾವಣೆ ೬ನೇ ಹಂತದ ಮತದಾನ ಪ್ರಗತಿಯಲ್ಲಿದೆ. ಒಟ್ಟು ೭ ಲೋಕಸಭಾ ಕ್ಷೇತ್ರಗಳಲ್ಲಿ ೧೬೨ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಬಿಜೆಪಿಯ ಮನೋಜ್ ತಿವಾರಿ, ಬಾನ್ಸುರಿ ಸ್ವರಾಜ್, ಆಮ್ ಆದ್ಮಿ ಪಕ್ಷದ ಸೋಮನಾಥ್ ಭಾರತಿ, ಕುಲದೀಪ್ ಕುಮಾರ್, ಕಾಂಗ್ರೆಸ್ ಪಕ್ಷದ ಕನ್ನಯ್ಯ ಕುಮಾರ್ ಮತ್ತು ಜೆ.ಪಿ. ಅಗರ್‌ವಾಲ್ ಕಣದಲ್ಲಿರುವ ಪ್ರಮುಖರಾಗಿದ್ದಾರೆ. ದೆಹಲಿಯಲ್ಲಿ ಒಟ್ಟು ಒಂದು ಕೋಟಿ ೫೨ ಲಕ್ಷ ಅರ್ಹ ಮತದಾರರಿದ್ದು, ೮೨ ಲಕ್ಷ ಪುರುಷ, ೭೦ ಲಕ್ಷ ಮಹಿಳಾ ಮತದಾರರಿದ್ದಾರೆ. ಸುಗಮ ಮತದಾನಕ್ಕಾಗಿ ೧೩ ಸಾವಿರದ ೬೩೭ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಪಶ್ಚಿಮಬಂಗಾಳದಲ್ಲಿ ೬ನೇ ಹಂತದಲ್ಲಿ ೮ ಲೋಕಸಭಾ ಕ್ಷೇತ್ರಗಳಲ್ಲಿ ಚುನಾವಣೆ ನಡೆಯುತ್ತಿದೆ. ಬಿಜೆಪಿಯ ಅಭಿಜಿತ್ ಗಂಗೋಪಾಧ್ಯಾಯ ಮತ್ತು ಹಿರಣ್ಮಯ್ ಚಟ್ಟೋಪಾಧ್ಯಾಯ, ತೃಣಮೂಲ ಕಾಂಗ್ರೆಸ್‌ನ ದೆಬಾಂಗ್‌ಶು ಭಟ್ಟಾಚಾರ್ಯ, ದೀಪಕ್ ಅಧಿಕಾರಿ ಕಣದಲ್ಲಿರುವ ಪ್ರಮುಖರಾಗಿದ್ದಾರೆ. ಮುಕ್ತ ಹಾಗೂ ನ್ಯಾಯಸಮ್ಮತ ಮತದಾನಕ್ಕಾಗಿ ಕೇಂದ್ರೀಯ ಪಡೆಗಳ ಒಟ್ಟು ೯೧೯ ಕಂಪನಿಗಳನ್ನು ನಿಯೋಜಿಸಲಾಗಿದ್ದು, ೮೯೨ ತ್ವರಿತ ಪ್ರತಿಕ್ರಿಯಾ ತಂಡಗಳನ್ನು ರಾಜ್ಯದಲ್ಲಿ ನಿಯೋಜಿಸಲಾಗಿದೆ.

*********

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಇಂದು ಒಂದು ದಿನದ ಬಿಹಾರ ಪ್ರವಾಸ ಕೈಗೊಳ್ಳಲಿದ್ದಾರೆ. ಈ ವೇಳೆ ಅವರು, ಪಾಟ್ನಾ, ರೋಹ್ತಾಸ್ ಮತ್ತು ಬುಕ್ಸಾರ್ ಜಿಲ್ಲೆಗಳಲ್ಲಿ ನಡೆಯುವ ಮೂರು ಪ್ರತ್ಯೇಕ ಸಾರ್ವಜನಿಕ ಸಭೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಮೊದಲಿಗೆ ಅವರು ಪಾಟ್ನಾದ ಬಿಕ್ರಮ್‌ನಲ್ಲಿ ಬಿಜೆಪಿ ಅಭ್ಯರ್ಥಿ ಪರ ಮತಯಾಚಿಸಲಿದ್ದಾರೆ. ಬಳಿಕ ಕರಾಕಟ್ ಲೋಕಸಭಾ ಕ್ಷೇತ್ರದಲ್ಲಿ ಪ್ರಚಾರ ನಡೆಸಲಿದ್ದು, ನಂತರ ಬಕ್ಸಾರ್ ಲೋಕಸಭಾ ಕ್ಷೇತ್ರದ ಅಹಿರೌಲಿಯಲ್ಲಿ ಚುನಾವಣಾ ಪ್ರಚಾರ ಕೈಗೊಳ್ಳಲಿದ್ದಾರೆ.

*********

ಹಿಮಾಚಲಪ್ರದೇಶದಲ್ಲಿ ಲೋಕಸಭಾ ಚುನಾವಣೆ ೭ನೇ ಹಂತಕ್ಕಾಗಿ ವಿವಿಧ ರಾಜಕೀಯ ಪಕ್ಷಗಳು ಪ್ರಚಾರ ಚುರುಕುಗೊಳಿಸಿದ್ದು, ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ನಿನ್ನೆ ಶಿಮ್ಲಾ ಮತ್ತು ಮಂಡಿ ಲೋಕಸಭಾ ಕ್ಷೇತ್ರದಲ್ಲಿ ಚುನಾವಣಾ ರ‍್ಯಾಲಿ ಕೈಗೊಂಡರು. ಈ ವೇಳೆ ಅವರು, ಕೇಂದ್ರ ಸರ್ಕಾರದ ಹತ್ತು ವರ್ಷದ ಸಾಧನೆಗಳನ್ನು ವಿವರಿಸಿ, ದೇಶದ ಗಡಿ ಭಾಗದ ಹಾಗೂ ಗುಡ್ಡಗಾಡು ಪ್ರದೇಶಗಳಲ್ಲಿರುವ ರಾಜ್ಯಗಳಲ್ಲಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಒತ್ತು ನೀಡಲಾಗಿದೆ ಎಂದರು. ನಂತರ ಮಂಡಿಯಲ್ಲಿ ನಡೆದ ರ‍್ಯಾಲಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಈಗಿರುವ ಮೀಸಲಾತಿಯನ್ನು ತೆಗೆದುಹಾಕಲು ಯೋಜಿಸುತ್ತಿದ್ದು, ಧರ್ಮಾಧಾರಿತ ಮೀಸಲಾತಿಯನ್ನು ಪರಿಚಯಿಸುವ ಉದ್ದೇಶ ಹೊಂದಿದೆ ಎಂದರು. ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಶಿಮ್ಲಾ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ರೋಹ್ರುನಲ್ಲಿಂದು ಚುನಾವಣಾ ರ‍್ಯಾಲಿ ಉದ್ದೇಶಿಸಿ ಮಾತನಾಡಲಿದ್ದಾರೆ.

*********

ಬಂಗಾಳಕೊಲ್ಲಿಯಲ್ಲಿ ರೆಮಲ್ ಚಂಡಮಾರುತದ ತೀವ್ರತೆ ಹೆಚ್ಚಾಗಿ ಪಶ್ಚಿಮ ಬಂಗಾಳ ಮತ್ತು ನೆರೆಯ ಬಾಂಗ್ಲಾದೇಶದ ಕರಾವಳಿಯನ್ನು ಅಪ್ಪಳಿಸುವ ನಿರೀಕ್ಷೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ನಿನ್ನೆ ಬಂಗಾಳಕೊಲ್ಲಿಯಲ್ಲಿನ ಉಂಟಾದ ವಾಯುಭಾರ ಕುಸಿತದಿಂದಾಗಿ ಚಂಡಮಾರುತವು ಉತ್ತರ-ಈಶಾನ್ಯಕ್ಕೆ ೮ ಕಿಮೀ ವೇಗದಲ್ಲಿ ಚಲಿಸಿತು ಮತ್ತು ಸಾಗರ ದ್ವೀಪಗಳ ದಕ್ಷಿಣ-ಆಗ್ನೇಯಕ್ಕೆ ೭೨೦ ಕಿಮೀ ಮತ್ತು ಪಶ್ಚಿಮ ಬಂಗಾಳದ ಕ್ಯಾನಿಂಗ್‌ನಿಂದ ೭೭೦ ಕಿಮೀ ದಕ್ಷಿಣಕ್ಕೆ ಪೂರ್ವ ಮಧ್ಯ ಬಂಗಾಳ ಕೊಲ್ಲಿಯಲ್ಲಿ ಕೇಂದ್ರೀಕೃತವಾಗಿದೆ. ಚಂಡಮಾರುತದ ಹಿನ್ನೆಲೆ, ಸಮುದ್ರದಲ್ಲಿ ಯಾವುದೇ ಜೀವಹಾನಿ ಮತ್ತು ಆಸ್ತಿ ನಷ್ಟವಾಗದಂತೆ ತಡೆಗಟ್ಟಲು ಭಾರತೀಯ ಕರಾವಳಿ ಕಾವಲು ಪಡೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದೆ.

ಚಂಡಮಾರುತದಿಂದ ಜನರಿಗಾಗುವ ಯಾವುದೇ ತೊಂದರೆಗಳಿಗೆ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಿಬೇಕು, ಪರಿಸ್ಥಿತಿಯ ಕುರಿತು ಕಾವಲುಪಡೆ ಅವಲೋಕಿಸುತ್ತಿದ್ದು, ಚಂಡಮಾರುತದ ಸಂಭಾವ್ಯ ಪಥವನ್ನು ಗುರುತಿಸಿ, ಅದಕ್ಕೆ ಅನುಗುಣವಾಗಿ ಸಮಯೋಚಿತ ನೆರವನ್ನು ನೀಡಲು ಸಿದ್ಧತೆ ನಡೆಸಿದೆ. ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ತ್ವರಿತ ನೆರವು ನೀಡುವ ನಿಟ್ಟಿನಲ್ಲಿ ಹಲ್ದಿಯಾ, ಪರದೀಪ್, ಗೋಪಾಲಪುರ್ ಮತ್ತು ಫ್ರೇಜರ್ ಗಂಜ್‌ನಲ್ಲಿ ೯ ವಿಕೋಪ ರಕ್ಷಣಾ ತಂಡಗಳನ್ನು ನಿಯೋಜಿಸಲಾಗಿದೆ.

*********

ದೇಶದ ಪ್ರಮುಖ ರಾಜ್ಯಗಳಲ್ಲಿ ೨೦೨೪-೨೫ರ ಬೆಳೆ ಕೊಯ್ಲು ಋತುವಿನಲ್ಲಿ ಗೋಧಿ ದಾಸ್ತಾನು ಸಾಕಷ್ಟು ಪ್ರಮಾಣದಲ್ಲಿದೆ. ಈ ವರ್ಷ ೨೬೨ ಲಕ್ಷ ಮೆಟ್ರಿಕ್ ಟನ್ ಗೋಧಿ ದಾಸ್ತಾನು ಮಾಡಲಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು ಮತ್ತು ಆಹಾರ ಸರಬರಾಜು ಸಚಿವಾಲಯ ತಿಳಿಸಿದೆ. ಕನಿಷ್ಠ ಬೆಂಬಲ ಬೆಲೆಯಾಗಿ ಒಟ್ಟು ೫೯ ಸಾವಿರದ ೭೧೫ ಕೋಟಿ ರೂಪಾಯಿಗಳನ್ನು ನೀಡಿದ್ದು, ಇದರಿಂದ ಒಟ್ಟಾರೆ ೨೨ ಲಕ್ಷದ ೩೧ ಸಾವಿರ ರೈತರಿಗೆ ಉಪಯೋಗವಾಗಿದೆ. ಇದೇ ವೇಳೆ ೯೮ ಲಕ್ಷದ ೨೬ ಸಾವಿರ ರೈತರಿಂದ ೭೨೮ ಲಕ್ಷ ಮೆಟ್ರಿಕ್ ಟನ್ ಭತ್ತ ಖರೀದಿಸಲಾಗಿದೆ. ಕನಿಷ್ಠ ಬೆಂಬಲ ಬೆಲೆಯಾಗಿ ಒಟ್ಟು ೧ ಲಕ್ಷದ ೬೦ ಸಾವಿರ ಕೋಟಿ ರೂಪಾಯಿಗಳನ್ನು ರೈತರಿಗೆ ನೀಡಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

*********

ಭಾರತದ ಗಡಿ ಭದ್ರತಾ ಪಡೆ-ಬಿಎಸ್‌ಎಫ್ ಸ್ಥಾಪಕ ಖುಸ್ರೊ ರುಸ್ತುಮ್ ಜಿ ಅವರ ದೂರದೃಷ್ಟಿಯ ಫಲವಾಗಿ ದೇಶ ಕಾಯುವ ಸದೃಢ ಪಡೆ ನಿರ್ಮಾಣವಾಗಿದೆ. ಇಂದು ಬಿಎಸ್‌ಎಫ್, ವಿಶ್ವದಲ್ಲೇ ಅತಿ ದೊಡ್ಡ ಗಡಿ ರಕ್ಷಣಾ ಪಡೆ ಎನಿಸಿಕೊಂಡಿದೆ ಎಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಹೇಳಿದರು.ದೆಹಲಿಯಲ್ಲಿ ನಿನ್ನೆ ಆಯೋಜಿಸಲಾಗಿದ್ದ ಬಿಎಸ್‌ಎಫ್‌ನ ಹೂಡಿಕೆ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ನಾವಿಂದು ಬದಲಾವಣೆಯ ಸಮಯದಲ್ಲಿದ್ದೇವೆ. ದೇಶ ಬದಲಾಗುತ್ತಿದೆ. ಮುಂದಿನ ೧೦ ವರ್ಷಗಳಲ್ಲಿ ಭಾರತ ೧೦ ಟ್ರಿಲಿಯನ್ ಡಾಲರ್ ಆರ್ಥಿಕತೆ ಹೊಂದಲಿದೆ. ೩ನೇ ಅತಿದೊಡ್ಡ ಆರ್ಥಿಕತೆ ಹೊಂದಿರುವ ದೇಶವಾಗಲಿದೆ. ತಂತ್ರಜ್ಞಾನ, ರಕ್ಷಣೆ, ಉತ್ಪಾದನೆ ವಲಯಗಳಲ್ಲಿ ಅಭೂತಪೂರ್ವ ಸಾಧನೆ ಮಾಡಲಿದ್ದೇವೆ ಎಂದು ಭರವಸೆ ವ್ಯಕ್ತಪಡಿಸಿದರು. ಪ್ರಸ್ತುತ, ರಕ್ಷಣಾ ಉತ್ಪನ್ನಗಳ ಉತ್ಪಾದನೆಯಲ್ಲಿ ದೇಶ ಸ್ವಾವಲಂಬಿಯಾಗುತ್ತಿದೆ. ಆತ್ಮನಿರ್ಭರ ಭಾರತ ನಿರ್ಮಾಣಕ್ಕೆ ಆದ್ಯತೆ ನೀಡಲು ಕೇಂದ್ರ ಸರ್ಕಾರ

ಹಲವು ಕ್ರಮಗಳನ್ನು ಕೈಗೊಂಡಿದೆ. ದೇಶೀಯ ರಕ್ಷಣಾ ಉತ್ಪನ್ನಗಳ ಪ್ರಮಾಣ ಏರಿಕೆಯಾಗುತ್ತಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಸಾಧನೆ ಖಚಿತ ಎಂದು ಅಜಿತ್ ದೋವಲ್ ಹೇಳಿದರು.

*********

ದಕ್ಷಿಣ ಚೀನಾ ಸಮುದ್ರಕ್ಕೆ ಭಾರತೀಯ ನೌಕಾಪಡೆಯ ಕಾರ್ಯಾಚರಣೆ ನಿಯೋಜನೆಯ ಭಾಗವಾಗಿ, ಭಾರತದ ಐಎನ್‌ಎಸ್ ಶಕ್ತಿ ಮತ್ತು ಐಎನ್‌ಎಸ್ ಕಿಲ್ತನ್ ಯುದ್ಧ ನೌಕೆಗಳು ಫಿಲಿಪ್ಪೀನ್ಸ್‌ಗೆ ಭೇಟಿ ನೀಡಿದ್ದು, ಯಶಸ್ವಿಯಾಗಿ ತಮ್ಮ ಪರ್ಯಟನೆ ಪೂರ್ಣಗೊಳಿಸಿವೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಫಿಲಿಪ್ಪೀನ್ಸ್ ಜತೆಗಿನ ಭೇಟಿಯು, ಉಭಯ ದೇಶಗಳ ಬಾಂಧವ್ಯ ಮತ್ತು ದ್ವಿಪಕ್ಷೀಯ ಪಾಲುದಾರಿಕೆಯನ್ನು ಇನ್ನಷ್ಟು ಬಲಪಡಿಸುವ ಬದ್ಧತೆಯನ್ನು ಪ್ರದರ್ಶಿಸಿದೆ ಎಂದು ಹೇಳಿದೆ. ಭೇಟಿ ವೇಳೆ, ಉಭಯ ದೇಶಗಳ ನೌಕಾಪಡೆಗಳ ನಡುವೆ ಸಹಯೋಗ ಹೆಚ್ಚಿಸುವ ಬಗ್ಗೆ, ಪರಸ್ಪರ ಹಿತಾಸಕ್ತಿ, ಪ್ರಾದೇಶಿಕ ಮತ್ತು ಜಾಗತಿಕ ಭದ್ರತಾ ಪರಿಸ್ಥಿತಿಗಳ ಕುರಿತು ಚರ್ಚೆ ನಡೆಸಲಾಯಿತು. ಭಾರತ-ಫಿಲಿಪ್ಪೀನ್ಸ್ ನೌಕಾಪಡೆಗಳ ಸಹಕಾರ ಬಲವರ್ಧನೆಗೆ ಈ ಭೇಟಿ ಅವಕಾಶ ಒದಗಿಸಿತ್ತು ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಪೂರ್ವ ಪ್ರದೇಶಗಳಿಗೆ ಆದ್ಯತೆ ನೀಡುವ ಭಾರತದ ನಿಲುವು ಈ ಮೂಲಕ ಪ್ರಕಟವಾಗಿದೆ ಹಾಗೂ ಸಾಗರ ನೀತಿಗೆ ಅನುಗುಣವಾಗಿ ಪ್ರಾದೇಶಿಕ ಶಾಂತಿ ಮತ್ತೂ ಸ್ಥಿರತೆ ಕಾಪಾಡಲು ಭಾರತ ಬದ್ಧತೆ ಪ್ರದರ್ಶಿಸಿದೆ ಎಂದು ಸಚಿವಾಲಯ ಹೇಳಿದೆ.

*********

ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೋರ್ವ ಆರೋಪಿಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆ - ಎನ್‌ಐಎ ಬಂಧಿಸಿದೆ. ಹುಬ್ಬಳ್ಳಿಯ ೩೫ ವರ್ಷದ ಶೋಯಬ್ ಅಹಮದ್ ಮಿರ್ಜಾ, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ೫ನೇ ಆರೋಪಿಯಾಗಿದ್ದು, ಲಷ್ಕರ್ ಎ ತೊಯ್ಬಾದ ಭಯೋತ್ಪಾದನಾ ಸಂಚು ಪ್ರಕರಣದಲ್ಲಿ ಮಾಜಿ ಆರೋಪಿಯಾಗಿದ್ದಾನೆ. ಈ ಪ್ರಕರಣದಲ್ಲಿ ಜೈಲಿನಿಂದ ಬಿಡುಗಡೆಯಾದ ನಂತರ ಶೋಯಬ್ ಮಿರ್ಜಾ, ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ಆರೋಪಿ ಅಬ್ದುಲ್ ಮತೀನ್ ತಹಾನನ್ನು ಆನ್‌ಲೈನ್ ಮೂಲಕ ಸಂಪರ್ಕಿಸಿದ್ದ ಎಂದು ಎನ್‌ಐಎ ಮಾಹಿತಿ ನೀಡಿದೆ. ಕಳೆದ ಮಾರ್ಚ್‌ನಲ್ಲಿ ನಡೆದ ಕೆಫೆ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲ್ಲಿಯವರೆಗೆ ದೇಶದ ೨೧ ವಿವಿಧ ಸ್ಥಳಗಳಲ್ಲಿ ಎನ್‌ಐಎ ವ್ಯಾಪಕ ಹುಡುಕಾಟ ನಡೆಸಿದೆ.

*********

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಎರಡನೇ ಕ್ವಾಲಿಫೈಯರ್ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ವಿರುದ್ಧ ಸನ್ ರೈಸರ್ಸ್ ಹೈದರಾಬಾದ್ ೩೬ ರನ್‌ಗಳ ಗೆಲುವು ದಾಖಲಿಸಿದ್ದು, ಫೈನಲ್ ಪಂದ್ಯಕ್ಕೆ ಪ್ರವೇಶ ಪಡೆದಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಹೈದರಾಬಾದ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೭೫ ರನ್ ಗಳಿಸಿತು. ಹೈದರಾಬಾದ್ ಪರ ಹೆನ್ರಿಕ್ ಕ್ಲಾಸೆನ್ ೫೦, ರಾಹುಲ್ ತ್ರಿಪಾಠಿ ೩೭, ಟ್ರಾವಿಸ್ ಹೆಡ್ ೩೪ ರನ್‌ಗಳಿಸಿದರು. ರಾಜಸ್ತಾನ ಪರ ಅವೇಶ್‌ಖಾನ್ ಹಾಗೂ ಟ್ರೆಂಟ್ ಬೋಲ್ಟ್ ತಲಾ ೩ ವಿಕೆಟ್ ಪಡೆದರು. ೧೭೬ ರನ್‌ಗಳ ಗುರಿ ಬೆನ್ನತ್ತಿದ ರಾಜಸ್ತಾನ್ ರಾಯಲ್ಸ್ ೭ ವಿಕೆಟ್ ನಷ್ಟಕ್ಕೆ ೧೩೯ ರನ್‌ಗಳಿಸಲಷ್ಟೇ ಶಕ್ತವಾಯಿತು. ಈ ಗೆಲುವಿನ ಮೂಲಕ ಹೈದರಾಬಾದ್ ತಂಡ ಫೈನಲ್ಸ್ ಪ್ರವೇಶಿಸಿದ್ದು, ನಾಳೆ ಇದೇ ಮೈದಾನದಲ್ಲಿ ನಡೆಯಲಿರುವ ಪಂದ್ಯದಲ್ಲಿ ಟ್ರೋಫಿಗಾಗಿ ಕೋಲ್ಕತ್ತಾ ನೈಟ್‌ರೈಡರ್ಸ್‌ನೊಂದಿಗೆ ಸೆಣಸಾಟ ನಡೆಸಲಿದೆ.

*****END****